## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.1206/2015

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಭೂಪಾಲ್ ನಾಯ್ಕು | CW: 3 | PW: 3 |
| ತಂದೆಯ ಹೆಸರು | : | ಲಕ್ಷ್ಮಾನಾಯ್ಕು | | |
| ವಯಸ್ಸು | : | 56 | | |
| ವೃತ್ತಿ | : | ವ್ಯವಸಾಯ | | |
| ವಾಸಸ್ಥಳ | : | ಸೋಗಿಲು ಗ್ರಾಮ | | |

ದಿನಾಂಕಃ 25.10.2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಚಾಸಾ 1 ರವರು ಗೊತ್ತಿಲ್ಲ. ಚಾಸಾ 2 ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ, ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ. ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.

ಪೋಲೀಸರ ಕೋರಿಕೆಯ ಮೇರೆಗೆ ಒಂದು ದಾಖಲೆಗೆ ನಾನು ಸಹಿಯನ್ನು ಮಾಡಿರುತ್ತೇನೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ 3 ಪೊಟೋದಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಸ್ಥಳ ಪಂಚನಾಮೆಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ 2(ಬಿ) ಎಂದು ಗುರುತಿಸಲಾಯಿತು. ನ್ಯಾಯಾಲಯದ ಮುಂದಿರುವ ಹಿಡಿಗಾತ್ರದ ಕಾಡು ಕಲ್ಲು ಹಾಗೂ ಸುಮಾರು 2 ಅಡಿ ಉದ್ದದ ಕಾಡು ಕಟ್ಟಿಗೆ ದೊಣ್ಣೆಯನ್ನು ನಾನು ಈ ಹಿಂದೆ ನೋಡಿಲ್ಲ.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-</u>

ದಿಃ 28.07.2015 ರಂದು ಪೋಲೀಸರು ಚಾಸಾ 1 ರವರು ಸ್ಥಳ ತೋರಿಸಿದ ನನ್ನ ಮತ್ತು ಚಾಸಾ 2 ರವರ ಸಮಕ್ಷಮ ಮಧ್ಯಾಹ್ನ 1.45 ರಿಂದ 2.30 ರ ಸಮಯದಲ್ಲಿ ಸವಳಂಗ ಗ್ರಾಮದ ಮಾರಿಕಾಂಬ ದೇವಸ್ಥಾನದ ಬಲಭಾಗದ ಖಾಲಿ ಜಾಗದಲ್ಲಿ ನಿಪಿ 2 ರಂತೆ ಸ್ಥಳ ಪಂಚನಾಮೆ ಜರುಗಿಸಿ, ನಿಪಿ 3 ರಂತೆ ಪೊಟೋ ತೆಗೆದು ನಮ್ಮವರ ಸಹಿ ಪಡೆದುಕೊಂಡು ಹಿಡಿಗಾತ್ರದ ಕಾಡು ಕಲ್ಲು ಹಾಗೂ ಸುಮಾರು 2 ಅಡಿ ಉದ್ದದ ಕಾಡು ಕಟ್ಟಿಗೆ ದೊಣ್ಣೆಯನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.